## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ಬಂಡ್ರಿ ಗ್ರಾಮದಲ್ಲಿ ಒಡೆದು ಹೋಗಿರುವ ಕೆರೆ ದುರಸ್ತಿ ಕಾಮಗಾರಿಗೆ ಅನುದಾನ ಹಂಚಿಕೆ ಮಾಡುವ ಕುರಿತು.

ಓದಲಾಗಿದೆ: ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ/198/ವೆಚ್ಚ-6/2016, ದಿನಾಂಕ:14-6-2016.

**ಪ್ರಸ್ತಾವನೆ:**

ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ಬಂಡ್ರಿ ಗ್ರಾಮದಲ್ಲಿ ಒಡೆದು ಹೋಗಿರುವ ಕೆರೆ ದುರಸ್ತಿ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಮೇಲೆ ಓದಲಾದ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಪ್ರಸ್ತಾವಿಸಿರುವ ಕಾಮಗಾರಿಗೆ ಬೇಕಾಗುವ ಅನುದಾನವನ್ನು ಲೆಕ್ಕಶೀರ್ಷಿಕೆ-2702-01-101-0-73-ಕೆರೆಗಳ ನವೀಕರಣ-059ರಡಿ ಪೂರಕ ಅಂದಾಜು-1ರಲ್ಲಿ ಒದಗಿಸಲಾಗುವುದೆಂದು ತಿಳಿಸಲಾಗಿದ್ದು, ಅದರಂತೆ ಆರ್ಥಿಕ ಇಲಾಖೆಯು ಪೂರಕ ಅಂದಾಜು-1ರಲ್ಲಿ ಒದಗಿಸುವ ಲೆಕ್ಕಶೀರ್ಷಿಕೆಯಡಿ ಅನುದಾನ ಬಿಡುಗಡೆ ಮಾಡಲಾಗುವುದು.

ಅದರಂತೆ ಪ್ರಸ್ತಾವಿತ ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ಬಂಡ್ರಿ ಗ್ರಾಮದಲ್ಲಿ ಒಡೆದು ಹೋಗಿರುವ ಕೆರೆ ದುರಸ್ತಿ ಕಾಮಗಾರಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ,

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:69:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:16-6-2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ಬಂಡ್ರಿ ಗ್ರಾಮದಲ್ಲಿ ಒಡೆದು ಹೋಗಿರುವ ಕೆರೆ ದುರಸ್ತಿ ಕಾಮಗಾರಿಯನ್ನು ರೂ.**150.00**ಲಕ್ಷ ಮೊತ್ತದಲ್ಲಿ ಲೆಕ್ಕಶೀರ್ಷಿಕೆ-2702-01-101-0-73-ಕೆರೆಗಳ ನವೀಕರಣ-059ರಡಿ ಕೈಗೊಳ್ಳಲು ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು,**

1. ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕಿನ ಬಂಡ್ರಿ ಗ್ರಾಮದಲ್ಲಿ ಒಡೆದು ಹೋಗಿರುವ ಕೆರೆ ದುರಸ್ತಿ ಕಾಮಗಾರಿಯನ್ನು ತುರ್ತು ಹಾಗೂ ಅಗತ್ಯತೆ ಆಧಾರದ ಮೇಲೆ ಹಂಚಿಕೆ ಮಿತಿಗೊಳಪಟ್ಟು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಅನುಷ್ಠಾನಗೊಳಿಸತಕ್ಕದ್ದು.
2. ಮುಖ್ಯ ಇಂಜಿನಿಯರ್, ಪಂ.ರಾ.ಇಂ. ಇಲಾಖೆ ರವರು ಈ ಕಾಮಗಾರಿಗೆ ಸಂಬಂಧಿಸಿದಂತೆ ಅನುಷ್ಠಾನದ ಜವಾಬ್ದಾರಿಯನ್ನು ನಿರ್ವಹಿಸುವುದು ಹಾಗೂ ಕಾರ್ಯಪಾಲಕ ಅಭಿಯಂತರರವರಿಂದ ಪ್ರಗತಿ ವರದಿಯನ್ನು ಪಡೆದು ಸರ್ಕಾರಕ್ಕೆ ಕಾಲ ಕಾಲಕ್ಕೆ ನೀಡತಕ್ಕದ್ದು.
3. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯನ್ನು ಜಿಲ್ಲಾ ಪಂಚಾಯತಿ/ಕೆಆರ್‌ಐಡಿಎಲ್/ ಇತರೆ ಯೋಜನೆ/ ಕಾರ್ಯಕ್ರಮದಡಿ/ ಲೆಕ್ಕಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ IRC ಮತ್ತಿತರ ತತ್ಸಮಾನ ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೊಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.

5. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ಕೆರೆ ಕಾಮಗಾರಿಯ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

6. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು Third party/SQM/DQM ರವರಿಂದ ತಪಾಸಣೆಗೆ ಒಳಪಡಿಸತಕ್ಕದ್ದು.

7. ಪ್ರಸ್ತುತ ಈ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿರುವ ರಸ್ತೆ ಕಾಮಗಾರಿಗಳನ್ನು Worksoft works monitoring ಪದ್ಧತಿ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಪೂರ್ಣ ಮಾಹಿತಿಯನ್ನು Worksoft website ನಲ್ಲಿ ತಪ್ಪದೇ ಅಳವಡಿಸತಕ್ಕದ್ದು.

8. 2014-15ನೇ ಸಾಲಿನಿಂದ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ. ಅದರಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೆ ಒಳಪಡಿಸಿದೆ.

9. ಈ ಆದೇಶದಂತೆ ಜಿಲ್ಲಾ ಪಂಚಾಯತಿಯಿಂದ ಅನುಷ್ಠಾನಗೊಳಿಸಿದ ಕಾಮಗಾರಿಗೆ ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂ.ರಾ.ಇಂ. ಇಲಾಖೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ. ರವರ ಮುಖಾಂತರ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1 &2), ಕರ್ನಾಟಕ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
5. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ,

ಬೆಂಗಳೂರು.

6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಜಿಲ್ಲಾ ಖಜಾನಾಧಿಕಾರಿಗಳು, ಬಳ್ಳಾರಿ ಜಿಲ್ಲೆ.
14. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-9
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ.
17. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
18. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ.
19. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
20. ರಕ್ಷಾ ಕಡತ / ಹೆಚ್ಚುವರಿ ಪ್ರತಿ.